ಭಾರತ ವನಿತೆಯರ ಸೆಮಿಫೈನಲ್ ಕನಸು ಭಗ್ನ!

ಐಸಿಸಿ ಮಹಿಳಾ ಟಿ20 ವಿಶ್ವಕಪ್: ಪಾಕಿಸ್ತಾನ ವಿರುದ್ಧ ನ್ಯೂಜಿಲೆಂಡ್‌ಗೆ ಭರ್ಜರಿ ಗೆಲುವು | ಗುಂಪಿನಲ್ಲಿ 2ನೇ ಸ್ಥಾನಿಯಾಗಿ ಕಿವೀಸ್ ಸೆಮಿಗೆ

ಭಾರತಕ್ಕೆ ಅಂಕಪಟ್ಟಿಯಲ್ಲಿ 3ನೇ ಸ್ಥಾನ, 6ನೇ ಬಾರಿ ಸೆಮಿಫೈನಲ್‌ಗೇರುವ ಚಾನ್ಸ್ ಮಿಸ್ | ಪಾಕ್ ಕೂಡಾ ಗುಂಪು ಹಂತದಲ್ಲೇ ಹೊರಕ್ಕೆ

ದುಬೈ: ಚೊಚ್ಚಲ ಐಸಿಸಿ ಟ್ರೋಫಿ ಗೆಲ್ಲುವ ಕನಸಿನೊಂದಿಗೆ ಯುಎಇ ವಿಮಾನವೇರಿದ್ದ ಭಾರತ ಮಹಿಳಾ ತಂಡ ಬರಿಗೈಲಿ ತವರಿಗೆ ಹಿಂದಿರುಗಲಿದೆ. 9ನೇ ಆವೃತ್ತಿ ಟೂರ್ನಿಯಲ್ಲಿ ಸೆಮಿಫೈನಲ್ ಪ್ರವೇಶಿಸುವ ನಿರೀಕ್ಷೆಯಲ್ಲಿದ್ದ ಹರ್ಮನ್‌ಪ್ರೀತ್ ಕೌರ್ ನಾಯಕತ್ವದ ಭಾರತ ಗುಂಪು ಹಂತದಲ್ಲೇ ಹೊರಬಿದ್ದಿದೆ. ನ್ಯೂಜಿಲೆಂಡ್ ಸೋಲಲಿ, ಪಾಕಿಸ್ತಾನ ಗೆಲ್ಲಲಿ ಎಂದು ಹಾರೈಸಿದ್ದ ಭಾರತೀಯ ಅಭಿಮಾನಿಗಳೂ ನಿರಾಸೆ ಅನುಭವಿಸಿದ್ದಾರೆ.

ಭಾರತ ಗುಂಪು ಹಂತದ ತನ್ನ ಕೊನೆ ಪಂದ್ಯವನ್ನು ಭಾನುವಾರವೇ ಆಡಿದ್ದರೂ, ಸೋಮವಾರದ ನ್ಯೂಜಿಲೆಂಡ್ ಹಾಗೂ ಪಾಕಿಸ್ತಾನ ಪಂದ್ಯದ ಮೇಲೆ ತಂಡದ ಸೆಮೀಸ್ ಭವಿಷ್ಯ ನಿರ್ಧಾರವಾಯಿತು. ನ್ಯೂಜಿಲೆಂಡ್ ವಿರುದ್ಧ ಪಾಕಿಸ್ತಾನ 54 ರನ್‌ಗಳಿಂದ ಹೀನಾಯವಾಗಿ ಸೋಲುವ ಮೂಲಕ ಭಾರತದ ಕನಸು ನುಚ್ಚುನೂರಾಯಿತು. ಒಂದು ವೇಳೆ ಪಾಕಿಸ್ತಾನ ಕಡಿಮೆ ಅಂತರದಲ್ಲಿ ಗೆದ್ದಿದ್ದರೆ ಭಾರತ ಸೆಮಿಫೈನಲ್ ಪ್ರವೇಶಿಸುತ್ತಿತ್ತು.

ಸೋಮವಾರದ ಪಂದ್ಯದ ಮೂಲಕ ಭಾರತ, ನ್ಯೂಜಿಲೆಂಡ್, ಪಾಕಿಸ್ತಾನಕ್ಕೂ ಸೆಮೀಸ್‌ಗೇರುವ ಅವಕಾಶವಿತ್ತು. ಒಂದು ವೇಳೆ ಪಾಕಿಸ್ತಾನ ದೊಡ್ಡ ಅಂತರದಲ್ಲಿ ಗೆದ್ದಿದ್ದರೆ, ಆಗ ಭಾರತ ಹಾಗೂ ನ್ಯೂಜಿಲೆಂಡ್ ಸೆಮಿಫೈನಲ್ ರೇಸ್‌ನಿಂದ ಹೊರಬೀಳುತ್ತಿದ್ದವು. ಆದರೆ ನ್ಯೂಜಿಲೆಂಡ್ ಗೆದ್ದ ಕಾರಣ ಭಾರತ ಹಾಗೂ ಪಾಕಿಸ್ತಾನ ಗುಂಪು ಹಂತದಲ್ಲೇ ಹೊರಬಿದ್ದವು.

ಆಸ್ಟ್ರೇಲಿಯಾ ಎಲ್ಲಾ 4 ಪಂದ್ಯಗಳಲ್ಲಿ ಗೆದ್ದು 8 ಅಂಕಗಳೊಂದಿಗೆ ಗುಂಪಿನಲ್ಲಿ ಅಗ್ರಸ್ಥಾನಿಯಾಗಿ ಸೆಮಿಫೈನಲ್ ಪ್ರವೇಶಿಸಿದರೆ, ನ್ಯೂಜಿಲೆಂಡ್ 6 ಅಂಕಗಳೊಂದಿಗೆ ಸೆಮೀಸ್ ತಲುಪಿತು.

ಹೀನಾಯ ಸೋಲು: ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ನ್ಯೂಜಿಲೆಂಡ್ 6 ವಿಕೆಟ್ ನಷ್ಟದಲ್ಲಿ 110 ರನ್ ಕಲೆಹಾಕಿತು. ಪಾಕಿಸ್ತಾನ ಉತ್ತಮ ದಾಳಿ ಸಂಘಟಿಸಿದರೂ ತಂಡದ ಕಳಪೆ ಫೀಲ್ಡಿಂಗ್‌ನ ಲಾಭ ಪಡೆದ ಕಿವೀಸ್ ಸ್ಪರ್ಧಾತ್ಮಕ ಮೊತ್ತ ಗಳಿಸಿತು. 111 ರನ್ ಗುರಿಯನ್ನು 10.4 ಓವರ್‌ಗಳಲ್ಲಿ ಬೆನ್ನತ್ತಿ ಗೆದ್ದಿದ್ದರೆ ಪಾಕಿಸ್ತಾನ ಸೆಮೀಸ್‌ಗೇರಬಹುದಿತ್ತು. ಆದರೆ ತಂಡ ಬ್ಯಾಟಿಂಗ್ ವೈಫಲ್ಯಕ್ಕೊಳಗಾಯಿತು. ಸನಾ 21, ಮುನೀಬಾ ಅಲಿ 15 ರನ್ ಗಳಿಸಿದ್ದು ಬಿಟ್ಟರೆ ಇತರರು ವಿಫಲರಾದರು. 11.4 ಓವರ್‌ಗಳಲ್ಲಿ 56 ರನ್‌ಗೆ ಆಲೌಟಾಯಿತು.

04 ನೇ ಬಾರಿ

ಭಾರತ ಮಹಿಳಾ ಟಿ20 ವಿಶ್ವಕಪ್‌ನಲ್ಲಿ ಗುಂಪು ಹಂತದಲ್ಲೇ ಹೊರಬಿದ್ದಿದ್ದು ಇದು 4ನೇ ಬಾರಿ. 2012, 2014, 2016ರಲ್ಲೂ ತಂಡ ನಾಕೌಟ್ ಗೇರಿರಲಿಲ್ಲ.

2016ರ ಬಳಿಕ ಮೊದಲ ಸಲ ಭಾರತ ಸೆಮಿಫೈನಲ್‌ಗಿಲ್ಲ

ಭಾರತ 2016ರ ಬಳಿಕ ಇದೇ ಮೊದಲ ಬಾರಿ ಟಿ20 ವಿಶ್ವಕಪ್ ಸೆಮಿಫೈನಲ್ ಪ್ರವೇಶಿಸಲು ವಿಫಲವಾಯಿತು. 2016ರಲ್ಲಿ ಮೊದಲ ಸುತ್ತಿನಲ್ಲೇ ಹೊರಬಿದ್ದಿದ್ದ ತಂಡ ಬಳಿಕ 3 ಆವೃತ್ತಿಗಳಲ್ಲಿ ನಾಕೌಟ್ ಪ್ರವೇಶಿಸಿತ್ತು. ಆದರೆ ಈ ಬಾರಿ ಸೆಮಿಫೈನಲ್ ಪ್ರವೇಶಿಸಲು ತಂಡ ವಿಫಲವಾಗಿದೆ. ತಂಡ ಒಟ್ಟಾರೆ 9 ಆವೃತ್ತಿಗಳಲ್ಲಿ 5 ಬಾರಿ(2009, 2010, 2018, 2020, 2023) ಸೆಮಿಫೈನಲ್ ಪ್ರವೇಶಿಸಿದೆ. ಈ ಪೈಕಿ 2020ರಲ್ಲಿ ತಂಡ ಫೈನಲ್‌ಗೇರಿದ್ದರೂ, ಆಸ್ಟ್ರೇಲಿಯಾ ವಿರುದ್ಧ ಸೋತು ರನ್ನರ್-ಅಪ್ ಸ್ಥಾನಕ್ಕೆ ತೃಪ್ತಿಪಟ್ಟುಕೊಂಡಿತ್ತು.

ಇಂದು ಗುಂಪು ಹಂತ ಮುಕ್ತಾಯ: ಇಂಗ್ಲೆಂಡ್ ⚔ ವಿಂಡೀಸ್ ಸೆಣಸು

ಈ ಬಾರಿ ಟೂರ್ನಿಯ ಗುಂಪು ಹಂತದ ಪಂದ್ಯಗಳು ಮಂಗಳವಾರ ಕೊನೆಗೊಳ್ಳಲಿದೆ. 'ಎ' ಗುಂಪಿನ ಎಲ್ಲಾ ಪಂದ್ಯಗಳು ಮುಕ್ತಾಯಗೊಂಡಿದ್ದು, 'ಬಿ' ಗುಂಪಿನ ಕೊನೆ ಪಂದ್ಯದಲ್ಲಿಂದು ಇಂಗ್ಲೆಂಡ್ ಹಾಗೂ ವೆಸ್ಟ್‌ಇಂಡೀಸ್ ಮುಖಾಮುಖಿಯಾಗಲಿವೆ.

ಮಾಜಿ ಚಾಂಪಿಯನ್ ಇಂಗ್ಲೆಂಡ್ ಈ ಬಾರಿ ಟೂರ್ನಿಯಲ್ಲಿ ಆಡಿರುವ ಮೂರೂ ಪಂದ್ಯ ಗೆದ್ದಿದ್ದು, ವಿಂಡೀಸ್ 3ರಲ್ಲಿ 2 ಗೆಲುವು ಸಾಧಿಸಿದೆ. ಈ ಪಂದ್ಯದಲ್ಲಿ ಇಂಗ್ಲೆಂಡ್ ಗೆದ್ದರೆ ಅಗ್ರಸ್ಥಾನಿಯಾಗಿಯೇ ಸೆಮೀಸ್‌ಗೇರಲಿದೆ. ಕಡಿಮೆ ಅಂತರದಲ್ಲಿ ಸೋತರೂ ತಂಡಕ್ಕೆ ಸೆಮೀಸ್ ಅವಕಾಶ ಸಿಗಲಿದೆ. ಒಂದು ವೇಳೆ ವಿಂಡೀಸ್ ಗೆದ್ದರೆ ಇಂಗ್ಲೆಂಡ್ ಹಾಗೂ ವಿಂಡೀಸ್ ಎರಡೂ ತಂಡಗಳು ಸೆಮೀಸ್‌ಗೇರಲಿದ್ದು, ಸದ್ಯ ಗುಂಪಿನಲ್ಲಿ 2ನೇ ಸ್ಥಾನದಲ್ಲಿರುವ ದಕ್ಷಿಣ ಆಫ್ರಿಕಾ(6 ಅಂಕ) ನೆಟ್ ರನ್ ರೇಟ್ ಆಧಾರದಲ್ಲಿ ಹೊರಬೀಳಲಿದೆ.

ಟೂರ್ನಿಯ 2 ಸೆಮಿಫೈನಲ್ ಪಂದ್ಯಗಳು ಅ.17 ಹಾಗೂ 18ರಂದು ನಿಗದಿಯಾಗಿವೆ. ಫೈನಲ್ ಪಂದ್ಯ ಅ.20ರಂದು ದುಬೈನಲ್ಲಿ ನಡೆಯಲಿದೆ.

ಸುದ್ದಿ ಸಿಂಚನ

ಡೆನ್ಮಾರ್ಕ್ ಓಪನ್ ಇಂದು ಶುರು: ಸಿಂಧು, ಸೇನ್ ಕಣಕ್ಕೆ

ಒಡೆನ್ಸೆ(ಡೆನ್ಮಾರ್ಕ್): ಡೆನ್ಮಾರ್ಕ್ ಓಪನ್ ಸೂಪರ್ 750 ಬ್ಯಾಡ್ಮಿಂಟನ್ ಟೂರ್ನಿ ಮಂಗಳವಾರ ಆರಂಭಗೊಳ್ಳಲಿದ್ದು, ಭಾರತದ ತಾರಾ ಶಟ್ಲರ್‌ಗಳಾದ ಪಿ.ವಿ.ಸಿಂಧು, ಲಕ್ಷ್ಯ ಸೇನ್ ಸೇರಿ ಪ್ರಮುಖರು ಕಣಕ್ಕಿಳಿಯಲಿದ್ದಾರೆ. ಒಲಿಂಪಿಕ್ಸ್ ಬಳಿಕ ಕಳೆದ ಬಾರಿ ಆಕ್ಟಿಕ್ ಓಪನ್‌ನಲ್ಲಿ ಆಡಿದ್ದ ಇವರಿಬ್ಬರೂ ನಿರೀಕ್ಷಿತ ಪ್ರದರ್ಶನ ನೀಡಲು ವಿಫಲರಾಗಿದ್ದರು. ಡೆನ್ಮಾರ್ಕ್ ಓಪನ್‌ನಲ್ಲಿ ಸುಧಾರಿತ ಆಟವಾಡುವ ಕಾತರದಲ್ಲಿದ್ದಾರೆ. ಮಹಿಳಾ ಸಿಂಗಲ್ಸ್‌ನಲ್ಲಿ ಮಾಳವಿಕಾ, ಆಕರ್ಷಿ ಕಶ್ಯಪ್, ಉನ್ನತಿ ಹೂಡಾ, ಮಹಿಳಾ ಡಬಲ್ಸ್‌ನಲ್ಲಿ ತ್ರೀಸಾ-ಗಾಯತ್ರಿ, ಮಿಶ್ರ ಡಬಲ್ಸ್‌ನಲ್ಲಿ ಸುಮೀತ್ ರೆಡ್ಡಿ-ಸಿಕ್ಕಿ ರೆಡ್ಡಿ ದಂಪತಿ ಕೂಡಾ ಕಣಕ್ಕಿಳಿಯಲಿದ್ದಾರೆ.

ಗಾಯ: ಭಾರತ ವಿರುದ್ಧ ಟೆಸ್ಟ್‌ಗೆ ಗ್ರೀನ್ ಅಲಭ್ಯ

ಮೆಲ್ಬರ್ನ್: ಬೆನ್ನಿಗೆ ಶಸ್ತ್ರಚಿಕಿತ್ಸೆಗೆ ಒಳಗಾಗಿರುವ ಆಸ್ಟ್ರೇಲಿಯಾದ ತಾರಾ ಆಲ್ರೌಂಡರ್ ಕ್ಯಾಮರೂನ್ ಗ್ರೀನ್ ಭಾರತ ವಿರುದ್ಧ 5 ಪಂದ್ಯಗಳ ಟೆಸ್ಟ್ ಸರಣಿಯಿಂದ ಹೊರಬಿದ್ದಿದ್ದಾರೆ. 25 ವರ್ಷದ ಗ್ರೀನ್ ಕಳೆದ ತಿಂಗಳು ಇಂಗ್ಲೆಂಡ್ ಪ್ರವಾಸದ ವೇಳೆ ಗಾಯಗೊಂಡಿದ್ದರು. ಅವರು ಶಸ್ತ್ರಚಿಕಿತ್ಸೆಯಿಂದ ಸಂಪೂರ್ಣ ಗುಣಮುಖರಾಗಲು 6 ತಿಂಗಳು ಅಗತ್ಯವಿದೆ. ಹೀಗಾಗಿ ಅವರು ಭಾರತ ವಿರುದ್ಧ ಸರಣಿಗೆ ಗೈರಾಗಲಿದ್ದಾರೆ ಎಂದು ಕ್ರಿಕೆಟ್ ಆಸ್ಟ್ರೇಲಿಯಾ ತಿಳಿಸಿದೆ. ಅವರು 2025ರ ಚಾಂಪಿಯನ್ಸ್ ಟ್ರೋಫಿ, ಐಪಿಎಲ್‌ಗೂ ಅಲಭ್ಯರಾಗುವ ಸಾಧ್ಯತೆಯಿದೆ ಎಂದು ಹೇಳಲಾಗುತ್ತಿದೆ. ಭಾರತ-ಆಸ್ಟ್ರೇಲಿಯಾ ಸರಣಿ ನ.22ರಿಂದ ಆರಂಭಗೊಳ್ಳಲಿದೆ.

ಸಿ.ಕೆ. ನಾಯ್ಡು ಕ್ರಿಕೆಟ್: ಕರ್ನಾಟಕದ ವಿರುದ್ಧ ತಮಿಳುನಾಡು 165/4

ಹುಬ್ಬಳ್ಳಿ: ಇಲ್ಲಿ ನಡೆಯುತ್ತಿರುವ ಸಿ.ಕೆ.ನಾಯ್ಡು ಅಂಡರ್-23 ಕ್ರಿಕೆಟ್ ಟೂರ್ನಿಯಲ್ಲಿ ಕರ್ನಾಟಕ ವಿರುದ್ಧ ತಮಿಳುನಾಡು 2ನೇ ದಿನದಂತ್ಯಕ್ಕೆ 4 ವಿಕೆಟ್‌ಗೆ 165 ರನ್ ಕಲೆಹಾಕಿದೆ. ಮಳೆಯಿಂದಾಗಿ ಮೊದಲ ದಿನದಾಟ ನಡೆದಿರಲಿಲ್ಲ. 2ನೇ ದಿನವಾದ ಸೋಮವಾರವೂ ಪಂದ್ಯಕ್ಕೆ ಮಳೆ ಅಡ್ಡಿಪಡಿಸಿತು. 2 ದಿನಗಳಲ್ಲಿ ಕೇವಲ 49 ಓವರ್ ಆಟ ನಡೆದಿದ್ದು, ಪಂದ್ಯ ಡ್ರಾಗೊಳ್ಳುವ ಸಾಧ್ಯತೆ ಹೆಚ್ಚು. ನಾಯಕ ವಿಮಲ್ ಕುಮಾರ್82 ರನ್ ಗಳಿಸಿ ತಮಿಳುನಾಡಿಗೆ ಆಸರೆಯಾದರು. ಕರ್ನಾಟಕ ತಂಡದ ಪರ ಶಶಿ ಕುಮಾರ್ ಎರಡು, ಪರಾಸ್ ಆರ್ಯ ಒಂದು ವಿಕೆಟ್ ಕಿತ್ತರು.

ಆಜಂ ಬೆಂಬಲಿಸಿ ಪೋಸ್ಟ್: ಫಖರ್‌ಗೆ ಪಿಸಿಬಿ ನೋಟಿಸ್

ಲಾಹೋರ್: ತಾರಾ ಆಟಗಾರ ಬಾಬರ್ ಆಜಂರನ್ನು ಇಂಗ್ಲೆಂಡ್ ವಿರುದ್ಧ ಟೆಸ್ಟ್ ಸರಣಿಯಿಂದ ಕೈಬಿಟ್ಟ ನಿರ್ಧಾರ ಪ್ರಶ್ನಿಸಿದ್ದ ತಂಡದ ಮತ್ತೋರ್ವ ಆಟಗಾರ ಫಖರ್ ಜಮಾನ್‌ಗೆ ಪಾಕ್ ಕ್ರಿಕೆಟ್ ಮಂಡಳಿ(ಪಿಸಿಬಿ) ಶೋಕಾಸ್ ನೋಟಿಸ್ ಜಾರಿಗೊಳಿಸಿದೆ. ಪಿಸಿಬಿಯ ನಿಯಮ ಉಲ್ಲಂಘಿಸಿದ್ದಕ್ಕೆ ಅ.21ರ ಮೊದಲು ಸ್ಪಷ್ಟನೆ ನೀಡುವಂತೆ ಜಮಾನ್‌ಗೆ ಸೂಚಿಸಲಾಗಿದೆ. ಆಜಂರನ್ನು ಕೊನೆ 2 ಪಂದ್ಯಗಳಿಂದ ಹೊರಗಿಟ್ಟ ಕ್ರಮವನ್ನು ಟೀಕಿಸಿದ್ದ ಜಮಾನ್, ಹಿರಿಯ ಆಟಗಾರರನ್ನು ಹೊರಗಿಡುವುದರಿಂದ ಋಣಾತ್ಮಕ ಸಂದೇಶ ರವಾನೆಯಾಗುತ್ತದೆ. ಆಜಂ ಉತ್ತಮ ಆಟಗಾರ ಎಂದು ಸಾಮಾಜಿಕ ತಾಣಗಳಲ್ಲಿ ಪೋಸ್ಟ್ ಮಾಡಿದ್ದರು.

ಕರ್ನಾಟಕ ⚔ ಮ.ಪ್ರ. ಪಂದ್ಯ ಡ್ರಾ

ರಣಜಿ ಟ್ರೋಫಿ ಕ್ರಿಕೆಟ್: ಮಳೆ ಅಡ್ಡಿ, ಪೂರ್ಣಗೊಳ್ಳದ ಮೊದಲ ಇನ್ನಿಂಗ್ಸ್

ಇಂದೋರ್: ಮಾಜಿ ಚಾಂಪಿಯನ್‌ಗಳಾದ ಕರ್ನಾಟಕ ಹಾಗೂ ಮಧ್ಯ ಪ್ರದೇಶ ನಡುವಿನ ಈ ಋತುವಿನ ರಣಜಿ ಟ್ರೋಫಿ ಕ್ರಿಕೆಟ್ ಟೂರ್ನಿಯ ಮೊದಲ ಪಂದ್ಯ ಡ್ರಾಗೊಂಡಿದೆ. ಪಂದ್ಯದ ಬಹುತೇಕ ಅವಧಿ ಮಳೆಗೆ ಆಹುತಿಯಾದ ಕಾರಣ ಇತ್ತಂಡಗಳ ಮೊದಲ ಇನ್ನಿಂಗ್ಸ್ ಕೂಡಾ ಮುಕ್ತಾಯಗೊಳ್ಳದೆ ಪಂದ್ಯ ಡ್ರಾ ಆಯಿತು. ಇದರೊಂದಿಗೆ ಉಭಯ ತಂಡಗಳು ತಲಾ 1 ಅಂಕಕ್ಕೆ ತೃಪ್ತಿಪಟ್ಟುಕೊಂಡವು. 4 ದಿನಗಳ ಪಂದ್ಯದಲ್ಲಿ ಕೇವಲ 215 ಓವರ್ ಆಟ ನಡೆಯಿತು.

ಮೊದಲು ಬ್ಯಾಟ್ ಮಾಡಿದ್ದ ಮಧ್ಯ ಪ್ರದೇಶ 3ನೇ ದಿನದಂತ್ಯಕ್ಕೆ 8 ವಿಕೆಟ್‌ಗೆ 425 ರನ್ ಗಳಿಸಿತ್ತು. ತಂಡ ಕೊನೆ ದಿನವಾದ ಸೋಮವಾರ ಬ್ಯಾಟ್ ಮಾಡದೆ ಡಿಕ್ಲೇರ್ ಮಾಡಿಕೊಂಡಿತು. ಬಳಿಕ ಬ್ಯಾಟಿಂಗ್ ಆರಂಭಿಸಿದ ಕರ್ನಾಟಕ 75 ಓವರ್‌ಗಳಲ್ಲಿ 5 ವಿಕೆಟ್ ಕಳೆದುಕೊಂಡು 206 ರನ್ ಗಳಿಸಿದ್ದಾಗ ಪಂದ್ಯ ಡ್ರಾ ಎಂದು ಘೋಷಿಸಲಾಯಿತು. ನಾಯಕ ಮಯಾಂಕ್ ಅಗರ್‌ವಾಲ್ ಶೂನ್ಯಕ್ಕೆ ವಿಕೆಟ್ ಒಪ್ಪಿಸಿದರೆ, ನಿಕಿನ್ ಜೋಸ್(99) ಶತಕದ ಅಂಚಿನಲ್ಲಿ ಎಡವಿದರು. 72ಕ್ಕೆ 4 ವಿಕೆಟ್ ಕಳೆದುಕೊಂಡಿದ್ದ ತಂಡಕ್ಕೆ ಶ್ರೇಯಸ್ ಗೋಪಾಲ್(ಔಟಾಗದೆ 60) ಆಸರೆಯಾದರು. ಕಾರ್ತಿಕೇಯ 3 ವಿಕೆಟ್ ಕಿತ್ತರು.

ಸ್ಕೋರ್: ಮಧ್ಯಪ್ರದೇಶ 425/8 ಡಿಕ್ಲೇರ್, ಕರ್ನಾಟಕ 206/5 (ನಿಕಿನ್ ಜೋಸ್ 99, ಶ್ರೇಯಸ್ ಗೋಪಾಲ್ 60*, ಕಾರ್ತಿಕೇಯ 3-68)

ಅ.18ರಿಂದ ಆಲೂರಲ್ಲಿ ಕರ್ನಾಟಕ ⚔ ಕೇರಳ

ಕರ್ನಾಟಕ ತಂಡ ಮುಂದಿನ ಪಂದ್ಯದಲ್ಲಿ ಅ.18ರಿಂದ ಕೇರಳ ವಿರುದ್ಧ ಸೆಣಸಾಡಲಿದೆ. ಪಂದ್ಯಕ್ಕೆ ಬೆಂಗಳೂರು ಹೊರವಲಯದ ಆಲೂರು ಕ್ರೀಡಾಂಗಣ ಆತಿಥ್ಯ ವಹಿಸಲಿದೆ. ಕೇರಳ ಮೊದಲ ಪಂದ್ಯದಲ್ಲಿ ಪಂಜಾಬ್ ವಿರುದ್ಧ 8 ವಿಕೆಟ್ ಅಂತರದಲ್ಲಿ ಭರ್ಜರಿ ಗೆಲುವು ಸಾಧಿಸಿತ್ತು.

ಕಿವೀಸ್ ಟೆಸ್ಟ್‌ಗೆ ಭಾರತ ಕಠಿಣ ಅಭ್ಯಾಸ

ಬೆಂಗಳೂರಿನಲ್ಲಿ ಆಟಗಾರರ ನೆಟ್ ಪ್ರಾಕ್ಟೀಸ್ | ನಾಳೆ ಪಂದ್ಯ ಶುರು

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ನ್ಯೂಜಿಲೆಂಡ್ ವಿರುದ್ಧ ಮಹತ್ವದ ಟೆಸ್ಟ್ ಸರಣಿಗೆ ಭಾರತೀಯ ಆಟಗಾರರು ಸಜ್ಜಾಗುತ್ತಿದ್ದಾರೆ. 3 ಪಂದ್ಯಗಳ ಸರಣಿಯ ಮೊದಲ ಪಂದ್ಯ ನಗರದ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಬುಧವಾರದಿಂದ ಆರಂಭಗೊಳ್ಳಲಿದ್ದು, ಸೋಮವಾರ ಭಾರತೀಯ ಆಟಗಾರರು ಕಠಿಣ ಅಭ್ಯಾಸದಲ್ಲಿ ತೊಡಗಿಸಿಕೊಂಡರು.

ತಂಡದ ಎಲ್ಲಾ ಆಟಗಾರರು ಮಧ್ಯಾಹ್ನದ ವೇಳೆ ಕ್ರೀಡಾಂಗಣದಲ್ಲಿ ನೆಟ್ಸ್ ಅಭ್ಯಾಸ ಆರಂಭಿಸಿದರು. ರೋಹಿತ್ ಶರ್ಮಾ, ವಿರಾಟ್ ಕೊಹ್ಲಿ, ಕೆ.ಎಲ್.ರಾಹುಲ್, ರಿಷಭ್ ಪಂತ್, ಅಕ್ಷರ್ ಪಟೇಲ್ ಗಂಟೆಗಳ ಕಾಲ ಬ್ಯಾಟಿಂಗ್ ಅಭ್ಯಾಸ ನಡೆಸಿದರು. ಕುಲ್ದೀಪ್ ಯಾದವ್ ಕೂಡಾ ಕೆಲ ಹೊತ್ತು ನೆಟ್ಸ್‌ನಲ್ಲಿ ಬ್ಯಾಟ್ ಬೀಸಿದರು.

ಆರ್.ಅಶ್ವಿನ್, ರವೀಂದ್ರ ಜಡೇಜಾ, ಮೊಹಮದ್ ಸಿರಾಜ್ ಕೂಡಾ ಮೈದಾನದಲ್ಲಿ ಬೆವರಿಳಿಸಿದರು. ಮುಖ್ಯ ಕೋಚ್ ಗೌತಮ್ ಗಂಭೀರ್, ಬೌಲಿಂಗ್ ಕೋಚ್ ಮೊರ್ನೆ ಮೊರ್ಕೆಲ್ ಕೂಡಾ ಮೈದಾನದಲ್ಲಿ ಉಪಸ್ಥಿತರಿದ್ದು, ಆಟಗಾರರಿಗೆ ಅಗತ್ಯ ಸಲಹೆಗಳನ್ನು ನೀಡುತ್ತಿದ್ದುದು ಕಂಡುಬಂತು. ಇದಕ್ಕೂ ಮುನ್ನ ನ್ಯೂಜಿಲೆಂಡ್ ಆಟಗಾರರು ಕೂಡಾ ಅಭ್ಯಾಸದಲ್ಲಿ ತೊಡಗಿಸಿಕೊಂಡರು.

ನಾವು ದಿನಕ್ಕೆ 500 ರನ್ ಗಳಿಸಲೂ ಸಿದ್ಧ: ಗಂಭೀರ್

ಸೋಮವಾರ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಭಾರತದ ಕೋಚ್ ಗೌತಮ್ ಗಂಭೀರ್, 'ನಮ್ಮ ಆಟಗಾರರು ದಿನಕ್ಕೆ 400-500 ಕಲೆಹಾಕಲು ಸಿದ್ಧವಿದ್ದರೆ ಅವರನ್ನು ನಾವೇಕೆ ತಡೆಯಬೇಕು? ನಾವು ಅದೇ ರೀತಿಯಲ್ಲಿ ಆಡುತ್ತೇವೆ. ಇದುವೇ ತಂಡದ ಬೆಳವಣಿಗೆ' ಎಂದಿದ್ದಾರೆ. ಹೆಚ್ಚಿನ ರಿಸ್ಕ್ ತೆಗೆಯು ವುದರಿಂದ ಅದರ ಲಾಭವೂ ಹೆಚ್ಚಿರುತ್ತದೆ. ಕೆಲವೊಮ್ಮೆ ವೈಫಲ್ಯವೂ ಎದುರಾಗುತ್ತದೆ. ದಿನಕ್ಕೆ 400 ರನ್ ಗಳಿಸುವ ಹಾಗೂ 2 ದಿನ ಬ್ಯಾಟ್ ಮಾಡಬಲ್ಲ ತಂಡ ನಮಗೆ ಬೇಕು. ಕೆಲವೊಮ್ಮೆ ನಾವು 100 ರನ್‌ಗೆ ಆಲೌಟಾಗಬಹುದು. ಆದರೆ ನಾವು ಆಟಗಾರರ ಬೆನ್ನಿಗೆ ನಿಲ್ಲುತ್ತೇವೆ' ಎಂದು ಗೌತಮ್ ಗಂಭೀರ್ ಅವರು ತಿಳಿಸಿದ್ದಾರೆ.

ಕೊಹ್ಲಿ ರನ್ ಹಸಿವು ಇನ್ನೂ ನೀಗಿಲ್ಲ, ಮೊದಲಿನಂತಿದೆ

ವಿರಾಟ್ ಕೊಹ್ಲಿಯ ಪ್ರದರ್ಶನದ ಬಗ್ಗೆ ಮಾತನಾಡಿರುವ ಕೋಚ್ ಗಂಭೀರ್, ಅವರ ರನ್ ಹಸಿವು ಇನ್ನೂ ನೀಗಿಲ್ಲ, ಪಾದಾರ್ಪಣೆ ವೇಳೆ ಇದ್ದಷ್ಟೇ ಈಗಲೂ ಇದೆ ಎಂದಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 'ಕೊಹ್ಲಿ ಬಗ್ಗೆ ನನ್ನ ನಿಲುವು ಸ್ಪಷ್ಟ. ಅವರೊಬ್ಬ ವಿಶ್ವ ಶ್ರೇಷ್ಠ ಕ್ರಿಕೆಟಿಗ. ಭಾರತ ಪರ ದೀರ್ಘ ಕಾಲದಿಂದ ಉತ್ತಮ ಪ್ರದರ್ಶನ ನೀಡುತ್ತಿರುವ ಆಟಗಾರ. ಅವರಲ್ಲಿ ಈಗಲೂ ರನ್ ಹಸಿವಿದೆ. ರನ್ ಗಳಿಸುವ ತುಡಿತ ಅವರನ್ನು ವಿಶ್ವ ಶ್ರೇಷ್ಠ ಆಟಗಾರನನ್ನಾಗಿ ರೂಪಿಸಿದೆ. ಅವರು ನ್ಯೂಜಿಲೆಂಡ್ ಹಾಗೂ ಆಸ್ಟ್ರೇಲಿಯಾ ಸರಣಿಯಲ್ಲಿ ಉತ್ತಮ ಪ್ರದರ್ಶನ ತೋರುವ ವಿಶ್ವಾಸವಿದೆ' ಎಂದಿದ್ದಾರೆ. ಕೊಹ್ಲಿಯ ಆಟದ ಬಗ್ಗೆ ಪ್ರತಿ ಪಂದ್ಯದ ಬಳಿಕವೂ ಜಡ್ಜ್ ಮಾಡಬೇಕಾಗಿಲ್ಲ. ಅದು ಒಳ್ಳೆಯದಲ್ಲ ಎಂದು ಗಂಭೀರ್ ತಿಳಿಸಿದ್ದಾರೆ.

ಹಾಲಿ ಚಾಂಪಿಯನ್ ಮುಂಬೈಗೆ ಸೋಲಿನ ಆಘಾತ

ವಡೋದರಾ: ಹಾಲಿ ರಣಜಿ ಹಾಗೂ ಇರಾನಿ ಕಪ್ ಚಾಂಪಿಯನ್ ಮುಂಬೈ ತಂಡ ಈ ಬಾರಿ ರಣಜಿ ಟ್ರೋಫಿ ಕ್ರಿಕೆಟ್‌ನಲ್ಲಿ ಸೋಲಿನ ಆರಂಭಪಡೆದಿದೆ. ಸೋಮವಾರ ಮುಕ್ತಾಯಗೊಂಡ ಬರೋಡಾ ವಿರುದ್ಧ ಪಂದ್ಯದಲ್ಲಿ ಅಜಿಂಕ್ಯಾ ರಹಾನೆ ನಾಯಕತ್ವದ ಮುಂಬೈ 6 ವಿಕೆಟ್ ಸೋಲನುಭವಿಸಿತು. ಗೆಲುವಿಗೆ 262 ರನ್ ಗುರಿ ಪಡೆದಿದ್ದ ಮುಂಬೈ ಕೊನೆ ದಿನ 48.2 ಓವರ್‌ಗಳಲ್ಲಿ 177 ರನ್‌ಗೆ ಆಲೌಟಾಯಿತು. ಎಡಗೈ ಸ್ಪಿನ್ನರ್ ಭಾರ್ಗವ್ ಭಟ್ 6 ವಿಕೆಟ್ ಕಿತ್ತರು. ಇದಕ್ಕೂ ಮುನ್ನ ಬರೋಡಾ ಮೊದಲ ಇನ್ನಿಂಗ್ಸ್‌ನಲ್ಲಿ 290 ರನ್ ಗಳಿಸಿದ್ದರೆ ಮುಂಬೈ 214ಕ್ಕೆ ಆಲೌಟಾಗಿತ್ತು. 2ನೇ ಇನ್ನಿಂ